ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ವಿರಾಜಪೇಟೆ

**ಉಪಸ್ಥಿತರುಃ ಸಂತೋಷ ಕೊಠಾರಿ,**

**ಬಿ.ಎ.ಎಲ್., ಎಲ್.ಎಲ್.ಬಿ.,**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ವಿರಾಜಪೇಟೆ**

# ಸಿ. ಸಿ. ನಂ. 96/2019

ಪಿರ್ಯಾದಿಃ ಶ್ರೀ ಅಬ್ರಹಾಂ ಮಣಿ,ತಂದೆಃ ಪೌತಿ ಪಿ.ಎಂ.ಮಣಿ,
ಪ್ರಾಯಃ 48 ವರ್ಷ, ವಾಸಃ ಚರ್ಚ್ ಬೀದಿ, ವಿರಾಜಪೇಟೆ ಟೌನ್,
ವಿರಾಜಪೇಟೆ ತಾಲ್ಲೂಕು,ಕೊಡಗು ಜಿಲ್ಲೆ.

(ಶ್ರೀ.ಜಿ.ಎಲ್.ಸಿ, ವಕೀಲರು,ವಿರಾಜಪೇಟೆ.)

***ವಿರುದ್ಧ***

ಆರೋಪಿಃ ಸುನೀಲ್ ಕೆ.ಟಿ , ತಂದೆಃ ಪೌತಿ ತಂಗಪ್ಪನ್,
ವಾಃ ನೆಲ್ಲಿ ಹುದಿಕೆರಿ ಗ್ರಾಮ,
ಸೋಮವಾರ ಪೇಟೆ ತಾಲ್ಲೂಕು,
ಕೊಡಗು ಜಿಲ್ಲೆ.

ಶ್ರೀಮತಿ ಎಸ್.ಬಿ.ಎಂ, ವಕೀಲರು,ವಿರಾಜಪೇಟೆ.)

**::ದಂಡ ಪ್ರಕ್ರಿಯಾ ಸಂಹಿತೆ ವಿಧಿ 313 (1)(ಬಿ) ರಡಿ ದಾಖಲಿಸಿದ ಆರೋಪಿತರ ಹೇಳಿಕೆ ::**

ಪ್ರಶ್ನೆಃ 1 ಪಿರ್ಯಾದುದಾರರ ಸಾಕ್ಷ್ಯವನ್ನು ತಿಳಿದುಕೊಂಡಿರುವಿರಾ?

ಉತ್ತರಃ

ಪ್ರಶ್ನೆಃ 2 ಪ್ರಾಸಾ-1 ಶ್ರೀ ಅಬ್ರಹಾಂ ಮಣಿ ರವರು ತಮ್ಮ ಮುಖ್ಯ ವಿಚಾರಣೆಯಲ್ಲಿ, ಆರೋಪಿಯಾದ ಶ್ರೀ ಸುನೀಲ್ ಕೆ.ಟಿರವರು ಪಿರ್ಯಾದಿಯವರಿಂದ ವ್ಯಾಪಾರದ ಸಲುವಾಗಿ ರೂ. 1,50,000/- ಹಣವನ್ನು ಸಾಲವಾಗಿ ಪಡೆದುಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 3 ಪ್ರಾಸಾ 1 ರವರು ಮುಂದುವರೆದು, ಸದರಿ ಹಣ ಮರು ಪಾವತಿ ಮಾಡುವ ಸಲುವಾಗಿ ಆರೋಪಿಯಾದ ನೀವು ಚೆಕ್ಕನ್ನು ನೀಡಿದ್ದು ಅದರಲ್ಲಿ ಚೆಕ್ ನಂಬರ್ 428021 ರೂ.1,50,000/- ಮತ್ತು ಚೆಕ್ ಸಂಖ್ಯೆ 428021, ರೂ.1,50,000/-ಗಳನ್ನು ದಿನಾಂಕ 01.11.2018 ವನ್ನು ನಮೂದಿಸಿ

ಕಾರ್ಪೊರೇಷನ್ ಬ್ಯಾಂಕ್, ನೆಲ್ಲಿಹುದಿಕೇರಿ ಶಾಖೆಯ ತಮ್ಮ ಖಾತೆಗೆ ಸಂಬಂಧಿಸಿದ ಚೆಕ್‌ನ್ನು ನೀಡಿದ್ದು, ನಗದೀಕರಿಸಿಕೊಂಡು ಸಾಲದ ಹಣವನ್ನು ಮರುಪಾವತಿ ಮಾಡಿಕೊಳ್ಳಬೇಕೆಂದು ಆರೋಪಿ ನನಗೆ ತಿಳಿಸಿರುತ್ತಾರೆ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 4 ಫಿರ್ಯಾದಿ 1 ರವರು ಮುಂದುವರೆದು, ನಿಮ್ಮ ಕೋರಿಕೆಯ ಮೇರೆಗೆ ಸದರಿ ಚೆಕ್‌ನ್ನು ಕಾರ್ಪೊರೇಷನ್ ಬ್ಯಾಂಕ್, ವಿರಾಜಪೇಟೆ ಶಾಖೆಯಲ್ಲಿ ನಗದೀಕರಿಸಲು ಸಲ್ಲಿಸಿದೆ ಆದರೆ ಆರೋಪಿಯ ಬ್ಯಾಂಕ್ ನವರು" Insufficient Funds" ಎಂಬ ಕಾರಣ ನೀಡಿ ದಿನಾಂಕ 14.01.2019 ರಂದು ಚೆಕ್‌ನ್ನು ಅಮಾನ್ಯಗೊಳಿಸಿ ಮೆಮೋದೊಂದಿಗೆ ಹಿಂತಿರುಗಿಸಿರುತ್ತಾರೆ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 5 ಫಿರ್ಯಾದಿ 1 ರವರು ಮುಂದುವರೆದು, ಚೆಕ್ ಅಮಾನ್ಯಗೊಂಡು ಮರಳಿ ಬಂದ ಬಳಿಕ ದಿನಾಂಕಃ 17.01.2019 ರಂದು ಆರೋಪಿಗೆ ತನ್ನ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನೋಟೀಸ್ ಕಳುಹಿಸಿ ಚೆಕ್‌ನಲ್ಲಿನ ಹಣವನ್ನು ಪಾವತಿ ಮಾಡಬೇಕೆಂದು ತಗಾದೆ ಮಾಡಿರುತ್ತೇನೆ ಆದರೂ ಸಹಾ ಆರೋಪಿಯು ಚೆಕ್‌ನ ಬಾಬ್ತು ಹಣವನ್ನು ಪಾವತಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆಃ 6 ಫಿರ್ಯಾದಿ 1 ರವರು ಮುಂದುವರೆದು, ಆರೋಪಿ ನನಗೆ ವಂಚನೆ ಮಾಡುವ ಉದ್ದೇಶದಿಂದ, ತಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದೇ ಇದ್ದರೂ ಚೆಕ್‌ನ್ನು ನೀಡಿರುತ್ತಾರೆ ಮತ್ತು ಚೆಕ್ ಹಣವನ್ನು ಪಾವತಿಸಿರುವುದಿಲ್ಲ ಎಂದು ತಿಳಿಸಿ ನಿಪಿ-1 ರಿಂದ ನಿಪಿ-5 ನ್ನು ಗುರುತಿಸಿಕೊಂಡಿದ್ದಾರೆ. ಈ ಬಗ್ಗೆ ನೀವೇನು ಹೇಳಬಯಸುವಿರಿ?

ಉತ್ತರಃ

ಪ್ರಶ್ನೆ: 7 ಮೇಲೆ ಓದಿ ಹೇಳಲಾದ ಪ್ರಶ್ನೆಗಳು ನಿಮಗೆ ಅರ್ಥವಾಯಿತೆ?

ಉತ್ತರಃ

ಪ್ರಶ್ನೆ: 8 ಈ ಮೊಕದ್ದಮೆ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ?

ಉತ್ತರಃ

ಪ್ರಶ್ನೆ: 9 ನಿಮ್ಮ ಪರವಾಗಿ ಅಭಿರಕ್ಷಣಾ ಸಾಕ್ಷ್ಯ ಇದೆಯೇ? ಇದ್ದರೆ ಮಂಡಿಸಿ.

ಉತ್ತರಃ

(ಮೇಲಿನ ಎಲ್ಲಾ ಪ್ರಶ್ನೆಗಳನ್ನು ಆರೋಪಿಗೆ ಓದಿ, ತಿಳಿ ಹೇಳಿದ ನಂತರ ಆರೋಪಿ ಅದನ್ನು ಅರ್ಥೈಸಿಕೊಂಡು ನಂತರ ನೀಡಿದ ಉತ್ತರಗಳನ್ನು ನಾನೇ ಸ್ವತಃ ದಾಖಲು ಮಾಡಿದ್ದೇನೆ. ಸದರಿ ದಾಖಲೆಯು ಸರಿಯಾದುದು ಮತ್ತು ನಿಜವಾದುದು ಎಂದು ದೃಡೀಕರಿಸುತ್ತೇನೆ.)

ಸಹಿಃ

(ಸಂತೋಷ ಕೊಠಾರಿ )

ದಿನಾಂಕಃ14.12.2023.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ವಿರಾಜಪೇಟೆ.